ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ, ಬೆಂಗಳೂರು

ದಿನಾಂಕ : 30-04-2022

ಸಂ: ಸ.ಅ/ವಾ-181/ಪಿ.ಆರ್/ /2022-23

## ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ :ಐ12(58)ಪಿಆರ್/35/2020-21 ದಿನಾಕ :21-09-2020 ರವರ ಆದೇಶದಂತೆ ದಿನಾಂಕ :30-04-2022 ರಂದು ವಾರ್ಡ್ ಸಂಖ್ಯೆ-181 ಕುಮಾರಸ್ವಾಮಿ ಬಡಾವಣೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ವಾರ್ಡ್ ಕಮಿಟಿ ಸಭೆ ನಿಗಧಿಪಡಿಸಿ ದಿನಾಂಕ :30-04-2022 ರಂದು ವಾರ್ಡ್ ಕಛೇರಿಯಲ್ಲಿ ಬೆಳಿಗ್ಗೆ 10.30 ಗಂಟೆಗೆ ಶ್ರೀ ನಾಗರಾಜ್ ಶಿರಗಾರ್ ನೋಡೆಲ್ ಅಧಿಕಾರಿಗಳು ರವರ ಅಧ್ಯಕ್ಷತೆಯಲ್ಲಿ ಹಾಗೂ ಶ್ರೀ ವೆಂಕಟಮಲವಯ್ಯ.ಕೆ ಸದಸ್ಯ ಕಾರ್ಯದರ್ಶಿ ರವರ ಕಾರ್ಯಾಧ್ಯಕ್ಷತೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರು ಹಾಜರಿರುತ್ತಾರೆ.

ಹಿಂದಿನ ವಾರ್ಡ್ ಸಭೆಯ ನಡವಳಿಗಳನ್ನು ಚರ್ಚಿಸಲಾಗಿರುತ್ತದೆ.

1) ಪ್ಲಾಸ್ಟಿಕ್ ಬ್ಯಾಗ್‌ಗಳನ್ನು ಅಂಗಡಿಗಳಲ್ಲಿ ಹೆಚ್ಚಾಗಿ ಬಳಕೆ ಮಾಡುತ್ತಿರುವುದು ಕಂಡುಬಂದಿದ್ದು, ಕೂಡಲೇ ಕ್ರಮ ಜರುಗಿಸಲು ಸೂಚಿಸಲಾಯಿತು.

2) ಹಿರಿಯ ಮತ್ತು ಕಿರಿಯ ಆರೋಗ್ಯ ಅಧಿಕಾರಿಗಳು ಮತ್ತು ವಾರ್ಡ್‌ಗೆ ಸಂಬಂಧಪಟ್ಟ ಎಲ್ಲಾ ಇಲಾಖಾ ಅಧಿಕಾರಿಗಳು ತಪ್ಪದೆ ವಾರ್ಡ್ ಸಭೆಗೆ ಹಾಜರಾಗಲು ಸೂಚಿಸಲಾಗಿರುತ್ತದೆ..

3) ಕೋವಿಡ್-19 4ನೇ ಅಲೆ ಹರಡುವ ಹಿನ್ನೆಲೆಯಲ್ಲಿ ಬೂಸ್ಟರ್ ಡೋಸ್ ಅನ್ನು ಅವಶ್ಯವಿರುವ ಎಲ್ಲರಿಗೂ ಹಾಕಲು ಸೂಚಿಸಲಾಗಿರುತ್ತದೆ.

4) ಅಕಾಲಿಕ ಮಳೆ ಶುರುವಾಗಿರುವುದರಿಂದ ಎಲ್ಲಾ ವಾರ್ಡ್‌ನ ಅಧಿಕಾರಿಗಳು ಜಾಗರೂಕರಾಗಿರಲು ಸೂಚಿಸಲಾಗಿರುತ್ತದೆ.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.

Scanned by CamScanner